ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-1**

ಸಂಖ್ಯೆ:ಸಿ4(6) ಶೈ ಮತ್ತು ರಜೆ. ಅ ನಿಗದಿ-35/2020-21 ದಿನಾಂಕ:31.05.2021

-:ಸುತ್ತೋಲೆ:-

ವಿಷಯ:-ರಾಜ್ಯದಲ್ಲಿನ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಶೈಕ್ಷಣಿಕ ಅವಧಿ ಮರು ನಿಗಧಿಪಡಿಸುವ ಕುರಿತು.

ಉಲ್ಲೇಖ:-01.ಈ ಕಚೇರಿ ಸುತ್ತೋಲೆ ಸಂಖ್ಯೆ:ಸಿ4(6) ಶೈ ಮತ್ತು ರಜೆ. ಅ ನಿಗದಿ-35/2020-21 ದಿನಾಂಕ:04.05.2021.

02.ನಿರ್ದೇಶಕರು ಪರೀಕ್ಷೆಗಳು ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ರವರ ಸುತ್ತೋಲೆ.ಸಂಖ್ಯೆ:ಸಿ1/ಎಸ್.ಎಸ್.ಎಲ್.ಸಿ/ಜೂನ್-2021/ಪ.ವೇ.ಪ/26/20-21 ದಿನಾಂಕ:13.05.2021.

03.ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಕರ್ನಾಟಕ ಸರ್ಕಾರದ ಸಚಿವಾಲಯ ಬಹುಮಹಡಿ ಕಟ್ಟಡ ಬೆಂಗಳೂರು ರವರ ಆದೇಶ ಸಂಖ್ಯೆ: RD 158 TNR 2020 DATED 21.05.2021

&&&&&&

ಕರ್ನಾಟಕ ರಾಜ್ಯ ಪಠ್ಯಕ್ರಮ ಅನುಸರಿಸುವ ಶಾಲೆಗಳಿಗೆ ಉಲ್ಲೇಖ 01ರ ಸುತ್ತೋಲೆಯಲ್ಲಿ 2020-21ನೇ ಸಾಲಿನ ಬೇಸಿಗೆ ರಜೆ ಮತ್ತು 2021-22ನೇ ಸಾಲಿನ ಶೈಕ್ಷಣಿಕ ವರ್ಷಾರಂಭ ಕುರಿತು(ತಾತ್ಕಾಲಿಕ) ವೇಳಾ ಪಟ್ಟಿಯನ್ನು ರಾಜ್ಯದಲ್ಲಿನ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಪ್ರಕಟಿಸಲಾಗಿತ್ತು.

ಉಲ್ಲೇಖ 02ರ ಸುತ್ತೋಲೆಯಲ್ಲಿ ಕೋವಿಡ್-19ರ ಹಿನ್ನೆಲೆಯಲ್ಲಿ 2020-21ನೇ ಸಾಲಿನ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯನ್ನು ಮುಂದೂಡಲಾಗಿದೆ.

ಮುಂದುವರೆದು ಉಲ್ಲೇಖ 03ರ ಆದೇಶದಲ್ಲಿ ದಿನಾಂಕ:07.06.2021ರ ಬೆಳಗ್ಗೆ 06-00ಗಂಟೆಯ ವರೆಗೆ ರಾಜ್ಯದಲ್ಲಿ ಲಾಕ್ ಡೌನ್ ವಿಸ್ತರಿಸಿ ಆದೇಶಿಸಲಾಗಿದೆ. ಈ ಅಂಶಗಳ ಹಿನ್ನೆಲೆಯಲ್ಲಿ ಶಾಲೆಗಳಿಗೆ 2020-21ನೇ ಸಾಲಿನ ಬೇಸಿಗೆ ರಜಾ ಅವಧಿಯನ್ನು ಉಲ್ಲೇಖ 01ರಲ್ಲಿ ನಿಗದಿಪಡಿಸಿರುವುದನ್ನು ಮಾರ್ಪಡಿಸಿ ಈ ಕೆಳಗಿನಂತೆ ಮರುನಿಗದಿ ಪಡಿಸಲಾಗಿದೆ.

**2020-21ನೇ ಸಾಲಿನ ಬೇಸಿಗೆ ರಜೆ ಹಾಗೂ 2021-22ನೇ ಸಾಲಿನ ಶೈಕ್ಷಣಿಕ ವರ್ಷಾರಂಭ ಕುರಿತ(ತಾತ್ಕಾಲಿಕ) ಪರಿಷ್ಕೃತ ವೇಳಾ ಪಟ್ಟಿ.**

ಅ) **ಪ್ರಾಥಮಿಕ ಶಾಲೆಗಳಿಗೆ:-** ಯಾವುದೇ ಬದಲಾವಣೆ ಇರುವುದಿಲ್ಲ.

ಆ) **ಪ್ರೌಢಶಾಲೆಗಳಿಗೆ:-**

- ದಿನಾಂಕ:14.06.2021ರ ವರೆಗೆ ಬೇಸಿಗೆ ರಜೆಯನ್ನು ವಿಸ್ತರಿಸಿದೆ.
- ರಜಾ ಅವಧಿಯಲ್ಲಿ 2020-21 ನೇ ಸಾಲಿನ 10 ನೇ ತರಗತಿ (ಎಸ್. ಎಸ್. ಎಲ್. ಸಿ.) ವಿದ್ಯಾರ್ಥಿಗಳೊಂದಿಗೆ ಸಂಬಂಧಿಸಿದ ಶಿಕ್ಷಕರು ಕಲಿಕಾ ವಿಷಯಕ್ಕೆ ಸಂಬಂಧಿಸಿದಂತೆ ದೂರವಾಣಿ ಮೂಲಕ ಸಂಪರ್ಕದಲ್ಲಿದ್ದು, ವಿದ್ಯಾರ್ಥಿಗಳ ಕ್ಲಿಷ್ಟಾಂಶಗಳನ್ನು ದೂರವಾಣಿ/ ಆನ್‌ಲೈನ್ ಮೂಲಕ ಪರಿಹರಿಸುವುದು ಹಾಗೂ ಮಾರ್ಗದರ್ಶನ ನೀಡುವುದು.
- ದಿನಾಂಕ:15.06.2021 ರಿಂದ 2021-22ನೇ ಸಾಲಿನ ಪ್ರೌಢಶಾಲೆಗಳ 8, 9 ಮತ್ತು 10ನೇ ತರಗತಿಗಳ ಶೈಕ್ಷಣಿಕ ವರ್ಷ ಪ್ರಾರಂಭ.

ಇ) **ವಿಶೇಷ ಸೂಚನೆಗಳು:-**

- **ಈ ಮೇಲ್ಕಂಡ ವೇಳಾಪಟ್ಟಿಯು ತಾತ್ಕಾಲಿಕವಾಗಿದ್ದು, ಕೋವಿಡ್-19 ಹಿನ್ನೆಲೆಯಲ್ಲಿ ಪರೀಷ್ಕರಣೆಗೆ ಒಳಪಡುತ್ತದೆ.**
- **ಕೋವೀಡ್-19ರ ಹಿನ್ನೆಲೆಯಲ್ಲಿ ಕಾಲಕಾಲಕ್ಕೆ ಸರ್ಕಾರ, ಇಲಾಖೆ ಮತ್ತು ಜಿಲ್ಲಾಡಳಿತಗಳು ನೀಡುವ ಸೂಚನೆಗಳನ್ನು ಮತ್ತು ನಿರ್ದೇಶನಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ತಿಳಿಸಿದೆ.**

(ಮಾನ್ಯ ಆಯುಕ್ತರ ಆದೇಶದ ಮೇರೆಗೆ)

ನಿರ್ದೇಶಕರು(ಪ್ರೌಢ ಶಿಕ್ಷಣ)
ಸಾರ್ವಜನಿಕ ಶಿಕ್ಷಣ ಇಲಾಖೆ
ಬೆಂಗಳೂರು

ಇವರಿಗೆ.

01. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ ಮತ್ತು ಅಭಿವೃದ್ಧಿ) ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಅಗತ್ಯ ಕ್ರಮಕ್ಕಾಗಿ.
02. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕರು(ಆಡಳಿತ ಮತ್ತು ಅಭಿವೃದ್ಧಿ) ರವರ ಮೂಲಕ ಮುಂದಿನ ಕ್ರಮಕ್ಕಾಗಿ.

ಪ್ರತಿಯನ್ನು ಗೌರವಗಳೊಂದಿಗೆ.

01. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
02. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಡಿಗಳ ಕಟ್ಟಡ ಬೆಂಗಳೂರು ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
03. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
04. ಮಾನ್ಯ ನಿರ್ದೇಶಕರು ಪದವಿಪೂರ್ವ ಶಿಕ್ಷಣ ಇಲಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ.
05. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು ಎಸ್.ಎಸ್.ಎ/ಆರ್.ಎಂ.ಎಸ್.ಎ ನೃಪತುಂಗ ರಸ್ತೆ, ಬೆಂಗಳೂರು ರವರಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ.
06. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು ರವರಿಗೆ ಮಾಹಿತಿಗಾಗಿ.
07. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ.
08. ಆಯುಕ್ತರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ.
09. ಆಯುಕ್ತರು ಸಮಾಜಕಲ್ಯಾಣ ಇಲಾಖೆ ಬೆಂಗಳೂರು ರವರಿಗೆ ಮಾಹಿತಿಗಾಗಿ.
10. ಆಯುಕ್ತರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ.
11. ಆಯುಕ್ತರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಬೆಂಗಳೂರು ರವರಿಗೆ ಮಾಹಿತಿಗಾಗಿ.
12. ಆಯುಕ್ತರು ಸಾರಿಗೆ ಇಲಾಖೆ ಬೆಂಗಳೂರು ರವರಿಗೆ ಮಾಹಿತಿಗಾಗಿ.
13. ಅಪರ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ಧಾರವಾಡ/ಕಲಬುರಗಿ ರವರಿಗೆ ಸೂಕ್ತ ಕ್ರಮಕ್ಕಾಗಿ.
14. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ.
15. ಸಹ ನಿರ್ದೇಶಕರು ಮಧ್ಯಾಹ್ನ ಉಪಹಾರ ಯೋಜನೆ ಬೆಂಗಳೂರು ರವರಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ.
16. ಕಛೇರಿ ಪ್ರತಿ